## ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಅಫಜಲಪೂರ

## ಸಿಸಿ ನಂ**. 234/2019**

ಚಾಸಾ-3 ಪ್ರಾಸಾ-2

ಸತ್ಯ ಪ್ರತಿಜ್ಞೆಯ ಮೇರೆಗೆ ಪ್ರಮಾಣಿಕೃತ ಹೇಳಿಕೆ
ಪಡೆದುಕೊಳ್ಳಲಾಯಿತು.
ದಿನಾಂಕ: 29-12-2025

| | | |
|---|---|---|
| ಹೆಸರು | : | ಸೊಂದಪ್ಪ |
| ತಂದೆಯ ಹೆಸರು | : | ಪರಮೇಶ್ವರ |
| ವಯಸ್ಸು | : | 30 ವರ್ಷ |
| ಉದ್ಯೋಗ | : | ಕೂಲಿಕೆಲಸ |
| ವಾಸಸ್ಥಳ | : | ಅಫಜಲಪುಇರ |

-: **ಮುಖ್ಯ ವಿಚಾರಣೆ :- ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ :-**

ಚಾಸಾ 2 ಪರಿಚಯ ಇರುವುದಿಲ್ಲ.

ಸಾಕ್ಷಿಗೆ ಜಪ್ತಿ ಪಂಚನಾಮೆಯನ್ನು ತೋರಿಸಿದ್ದು ಸಾಕ್ಷಿ ಅದರಲ್ಲಿ ತನ್ನ ಸಹಿ ನೋಡಿ ಗುರುತಿಸಿದ್ದು ಜಪ್ತಿ ಪಂಚನಾಮೆಯನ್ನು ಈಗಾಗಲೇ ನಿಪಿ**-1** ಎಂದು ಗುರುತಿಸಲಾಗಿದ್ದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ**-1**(ಬಿ) ಎಂದು ಗುರುತಿಸಲಾಯಿತು.

ನಾನು ಒಂದು ದಿನ ಪೋಲಿಸ ಠಾಣೆ ಕಡೆ ಹೋದಾಗ ಪೋಲಿಸರು ಸಹಿ ಮಾಡು ಎಂದು ಹೇಳಿದ್ದಕ್ಕೆ ಸಹಿ ಮಾಡಿರುತ್ತೇನೆ. ನನಗೆ ಈ ಪ್ರಕರಣದ ಕುರಿತು ಯಾವುದೇ ಮಾಹಿತಿ ಇಲ್ಲ.

(ಈ ಹಂತದಲ್ಲಿ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)

<u>ಪಾಟೀ ಸವಾಲುಃ ಸ.ಸ.ಅ. ರವರಿಂದ</u>

ದಿಃ 20-10-2017 ರಂದು ಚಾಸಾ 1 ರವರು ಬೆಳಿಗ್ಗೆ 9 ಗಂಟೆಗೆ ನನಗೆ ಮತ್ತು ಚಾಸಾ 2 ರವರಿಗೆ ಠಾಣೆಗೆ ಕರೆಯಿಸಿ ತಮಗೆ ಬಂದ ಭಾತ್ಮಿ ತಿಳಿಸಿ ಪಂಚರಾಗಲು ಕೇಳಿದ್ದು ಅದಕ್ಕೆ ನಾವು ಒಪ್ಪಿಕೊಂಡು ಅಫಜಲಪುರ ಕಲಬುರಗಿ ರಸ್ತೆಯ ನೀರಾವರಿ ಕಚೇರಿ ಹತ್ತಿರ ಒಬ್ಬ ವ್ಯಕ್ತಿ ನಿಂತಿದ್ದು ಆತನು ನಮ್ಮನ್ನು ನೋಡಿ ಓಡಿಹೋಗಲು ಪ್ರಯತ್ನಿಸಿದ್ದು ಆತನನ್ನು ಹಿಡಿದು ಆತನ ಬಳಿಯಿಂದ ಒಂದು ನಾರ ಪಿಸ್ತೂಲು ಮತ್ತು 3 ಜೀವಂತ ಗುಂಡುಗಳನ್ನು ಜಪ್ತಿ ಪಡಿಸಿಕೊಂಡು ಜಪ್ತಿ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿ ಪರ ಶ್ರೀ **MSD** ವಕೀಲರಿಂದಃ-</u>

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲಾ ಎಂದು ನುಡಿದಿರುತ್ತಾರೆ.

<u>ಮರು ವಿಚಾರಣೆಃ - ಇಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ

ಸಿವಿಲ್ & ಪ್ರ.ದ.ನ್ಯಾ. ದಂಡಾಧಿಕಾರಿಗಳು
ಅಫಜಲಪೂರ